ಕರ್ನಾಟಕ ಸರ್ಕಾರ

**ಸಂಖ್ಯೆ: ಸಿಆಸುಇ 21 ಎಸ್ಎಂಆರ್ 2018**

**ಕರ್ನಾಟಕ ಸರ್ಕಾರದ ಸಚಿವಾಲಯ,**
**ವಿಧಾನಸೌಧ,**
**ಬೆಂಗಳೂರು, ದಿನಾಂಕ:22.06.2018.**

# ಸುತ್ತೋಲೆ

**ವಿಷಯ:** ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರಲ್ಲಿ ನಿಗದಿಪಡಿಸಿರುವ ಸರ್ಕಾರಿ ನೌಕರರ ಅವಲಂಬಿತ ತಂದೆ- ತಾಯಿಯವರ ಆದಾಯದ ಮಿತಿಯನ್ನು ಪರಿಷ್ಕರಿಸುವ ಬಗ್ಗೆ.

**ಉಲ್ಲೇಖ :** (1) ಅಧಿಸೂಚನೆ ಸಂಖ್ಯೆ: ಸಿಆಸುಇ 2 ಎಸ್ಎಂಆರ್ 2015, ದಿನಾಂಕ:29.08.2017.
(2) ಸರ್ಕಾರಿ ಆದೇಶ ಸಂಖ್ಯೆ: ಆಇ (ವಿಶೇಷ) 81 ಪಿಇಎನ್ 2012, ದಿನಾಂಕ: 03.05.2012.
(3) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 2 ಎಸ್ಎಂಆರ್ 2015, ದಿನಾಂಕ:27.09.2017.
(4) ಸರ್ಕಾರಿ ಆದೇಶ ಸಂಖ್ಯೆ: ಆಇ 33 ಪಿಇಎನ್ 2018, ದಿನಾಂಕ: 24.04.2018.

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963ರ **ನಿಯಮ 2**(1) (ii) ರಲ್ಲಿ ನಿಗಧಿಪಡಿಸಿರುವ ಷರತ್ತುಗಳನ್ನು ಪೂರೈಸುವ ರಾಜ್ಯ ಸರ್ಕಾರಿ ನೌಕರರ ಅವಲಂಬಿತ ತಂದೆ-ತಾಯಿಯವರ ವೈದ್ಯಕೀಯ ವೆಚ್ಚ ಮರುಪಾವತಿಗೆ ಅವಕಾಶವನ್ನು ಕಲ್ಪಿಸಲಾಗಿದೆ.

ಉಲ್ಲೇಖಿತ(1) ರ ಅಧಿಸೂಚನೆಯಲ್ಲಿ, ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ **ನಿಯಮ 2**(1) (ii)ರಲ್ಲಿರುವ ಆದಾಯದ ಮಿತಿ ***"ಆರು ಸಾವಿರ ರೂಪಾಯಿಗಳು"*** ಎಂಬ ಪದಗಳ ಬದಲಿಗೆ ***"ರಾಜ್ಯ ಸರ್ಕಾರವು ನಿಗಧಿಪಡಿಸಿದ ಕನಿಷ್ಟ ಮೂಲ ಪಿಂಚಣಿ ಹಾಗೂ ವೈದ್ಯಕೀಯ ವೆಚ್ಚ ಮರುಪಾವತಿಯನ್ನು ಪರಿಗಣಿಸುವ ದಿನಾಂಕದಂದು ಕನಿಷ್ಟ ಮೂಲ ಪಿಂಚಣಿಗೆ ಲಭ್ಯವಾಗುವ ತುಟ್ಟಿಭತ್ಯೆಯನ್ನು ಒಳಗೊಂಡ ಮೊತ್ತ"*** ಎಂಬ ಪದಗಳನ್ನು ಪ್ರತಿಸ್ಥಾಪಿಸಿ ತಿದ್ದುಪಡಿ ಮಾಡಲಾಗಿದೆ.

ಉಲ್ಲೇಖಿತ (2)ರ ಆದೇಶದಲ್ಲಿ ಆರ್ಥಿಕ ಇಲಾಖೆಯು ನಿಗದಿಪಡಿಸಿದ ನಿವೃತ್ತಿ ವೇತನ ಸೌಲಭ್ಯದ ಪರಿಮಿತಿಯನ್ನು ಆಧರಿಸಿ, ಉಲ್ಲೇಖಿತ(3) ರ ಆದೇಶದಲ್ಲಿ, ಸರ್ಕಾರಿ ನೌಕರರ ಅವಲಂಬಿತ ತಂದೆ-ತಾಯಿಯ ವೈದ್ಯಕೀಯ ವೆಚ್ಚ ಮರುಪಾವತಿ ಪ್ರಕರಣಗಳ ಪರಿಶೀಲನೆಯ ಸಂದರ್ಭದಲ್ಲಿ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) (ತಿದ್ದುಪಡಿ) ನಿಯಮಗಳು, 2017ರನ್ವಯ ನಿಗದಿಪಡಿಸಿದ ಆದಾಯದ ಮಿತಿಯ ಪರಿಗಣನೆಯನ್ನು ಸ್ಪಷ್ಟೀಕರಿಸಲಾಗಿದೆ. ಈ ಸಂದರ್ಭದಲ್ಲಿ, ರಾಜ್ಯದ ನಿವೃತ್ತ ಸರ್ಕಾರಿ ನೌಕರರುಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು ಮತ್ತು ಕರ್ನಾಟಕ ನಾಗರೀಕ ಸೇವಾ(ಅಸಾಧಾರಣ ನಿವೃತ್ತಿ ವೇತನ) ನಿಯಮಾವಳಿಗಳು 2003 ರನ್ವಯ ಲಭ್ಯವಾಗುವ ವಿವಿಧ ಬಗೆಯ ನಿವೃತ್ತಿ ವೇತನಗಳಿಗೆ ಆರ್ಥಿಕ ಇಲಾಖೆಯು ನಿಗಧಿಪಡಿಸಿರುವ ಮಾಹೆಯಾನ ರೂ.4800/-ಗಳ ಕನಿಷ್ಠ ಮೊತ್ತವನ್ನು '*ರಾಜ್ಯ ಸರ್ಕಾರವು ನಿಗಧಿಪಡಿಸಿದ ಕನಿಷ್ಟ ಮೂಲ ಪಿಂಚಣಿ*' ಎಂದು ಪರಿಗಣಿಸಲಾಗಿರುತ್ತದೆ.

. . . . 2

ಪ್ರಸ್ತುತ, 6ನೇ ವೇತನ ಆಯೋಗದ ವರದಿಯ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯು ಉಲ್ಲೇಖಿತ(4) ರ ಆದೇಶದಲ್ಲಿ, ನಿವೃತ್ತಿ ವೇತನ ಸೌಲಭ್ಯಗಳ ಪರಿಷ್ಕರಣೆಯನ್ನು ಮಾಡಿ, ನಿವೃತ್ತಿ ವೇತನಗಳ ಕನಿಷ್ಠ ಮೊತ್ತವನ್ನು ಮಾಹೆಯಾನ ರೂ.4800/-ಗಳಿಂದ ರೂ.8500/-ಗಳಿಗೆ ಹೆಚ್ಚಿಸಿ, ತತ್ಸಂಬಂಧದ ಆರ್ಥಿಕ ಸೌಲಭ್ಯ ದಿನಾಂಕ:01.04.2018ರಿಂದ ಜಾರಿಗೆ ಬರುವಂತೆ ನಿಗದಿಪಡಿಸಿರುತ್ತದೆ.

ಆದುದರಿಂದ, ರಾಜ್ಯ ಸರ್ಕಾರಿ ನೌಕರರ ಅವಲಂಬಿತ ತಂದೆ-ತಾಯಿಯವರಿಗೆ ಸಂಬಂಧಿಸಿದಂತೆ, ದಿನಾಂಕ:01.04.2018 ಮತ್ತು ನಂತರ ಪಡೆದ ಚಿಕಿತ್ಸೆಯ ವೈದ್ಯಕೀಯ ವೆಚ್ಚ ಮರುಪಾವತಿಯ ಪ್ರಕರಣಗಳನ್ನು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ **ನಿಯಮ** 2(1) (ii)ರನ್ವಯ ಪರಿಶೀಲಿಸುವ ಸಂದರ್ಭದಲ್ಲಿ, ಮಾಸಿಕ ಆದಾಯದ ಮಿತಿ ಎಂದರೆ **'ರಾಜ್ಯ ಸರ್ಕಾರವು ನಿಗಧಿಪಡಿಸಿರುವ ಕನಿಷ್ಠ ಮೂಲ ಪಿಂಚಣಿ ರೂ.8500/-(ಎಂಟು ಸಾವಿರದ ಐದು ನೂರು ರೂಪಾಯಿಗಳು) ಹಾಗೂ ಅದಕ್ಕೆ ಆರ್ಥಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸಿದಂತೆ ಲಭ್ಯವಾಗುವ ತುಟ್ಟಿಭತ್ಯೆಯ ದರಗಳನ್ನು ಸೇರಿಸಿ ಒಳಗೊಂಡ ಮೊತ್ತ'** ಎಂದು ಪರಿಗಣಿಸುವಂತೆ ತಿಳಿಸಲಾಗಿದೆ.

22/06/18

(ಎ.ವಿ.ಶೈಲಜ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2).

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು.
4. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
7. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ, ವಿಧಾನ ಸೌಧ, ಬೆಂಗಳೂರು.
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ವಿಧಾನ ಸೌಧ, ಬೆಂಗಳೂರು.
9. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ್, ಚಾಣಕ್ಯ ಪುರಿ, ನವದೆಹಲಿ-110011.
10. ಎಲ್ಲಾ ಇಲಾಖಾ ಮುಖ್ಯಸ್ಥರು.
11. ಎಲ್ಲಾ ಪ್ರಾದೇಶಿಕ ಆಯುಕ್ತರು.
12. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
13. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
14. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
15. ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು.
16. ರಾಜ್ಯದ ಜಿಲ್ಲಾ ಆಸ್ಪತ್ರೆಗಳ ಎಲ್ಲಾ ಜಿಲ್ಲಾ ವೈದ್ಯಾಧಿಕಾರಿಗಳು.
17. ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
18. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು.
19. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
20. ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
21. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
22. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
23. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
24. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು/ವಾರದ ಗೆಜೆಟ್.

- www.sachivalaya.karnataka.gov.in ತಂತ್ರಾಂಶದಲ್ಲಿ ಈ ಸುತ್ತೋಲೆಯನ್ನು ವೀಕ್ಷಿಸಬಹುದು.